# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀಮತಿ ವೀಣಾ ಅಚ್ಚಯ್ಯ ಎಸ್ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 144 (97) |
| ಉತ್ತರಿಸಬೇಕಾದ ದಿನಾಂಕ | : | 03.03.2020 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1 | ಕೊಡಗು ಜಿಲ್ಲೆಯಲ್ಲಿ ಹಲವಾರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹೊಸದಾಗಿ ಕಟ್ಟಡ ನಿರ್ಮಾಣ ಮಾಡಿಕೊಳ್ಳಲು ಸ್ವಂತ ಆರ್ಥಿಕ ಬಲವಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿವೆಯೇ? | ಹೌದು. |
| 2 | ಬಂದಿದ್ದಲ್ಲಿ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಜಿಲ್ಲೆಯಲ್ಲಿನ ಎಷ್ಟು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಹೊಸ ಕಟ್ಟಡ ನಿರ್ಮಾಣಕ್ಕೆ ಆರ್ಥಿಕ ಸೌಲಭ್ಯ ಒದಗಿಸಲಾಗಿದೆ? (ವಿವರ ನೀಡುವುದು) | ಕೊಡಗು ಜಿಲ್ಲೆಯಲ್ಲಿ ಒಟ್ಟು 73 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ 71 ಸಹಕಾರ ಸಂಘಗಳು ಸ್ವಂತ ಕಟ್ಟಡವನ್ನು ಹೊಂದಿರುತ್ತದೆ. ಉಳಿದ 2 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹೊಸದಾಗಿ ಕಟ್ಟಡ ನಿರ್ಮಾಣ ಮಾಡಿಕೊಳ್ಳಲು ಸ್ವಂತ ಆರ್ಥಿಕ ಬಲವಿಲ್ಲದಿರುವುದು ವರದಿಯಾಗಿರುತ್ತದೆ.<br><br>ಆದರೆ, ಪ್ರಸಕ್ತ 2019-20ನೇ ಸಾಲಿನಲ್ಲಿ ಆಯವ್ಯಯದಲ್ಲಿ ಅವಕಾಶವಿಲ್ಲದ ಕಾರಣ ಕೊಡಗು ಜಿಲ್ಲೆಯಲ್ಲಿರುವ ಯಾವುದೇ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಹೊಸ ಕಟ್ಟಡ ನಿರ್ಮಾಣಕ್ಕೆ ಅನುದಾನ ಒದಗಿಸಿರುವುದಿಲ್ಲ. |

ಸಿಒ 78 ಸಿಎಲ್ಎಸ್ 2020

(ಎಸ್.ಟಿ ಸೋಮಶೇಖರ್)
ಸಹಕಾರ ಸಚಿವರು